# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 703 |
| ಸದಸ್ಯರ ಹೆಸರು | : | ಶ್ರೀಮತಿ ಬಲ್ಕೀಸ್ ಬಾನು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 22.07.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಬಹುಪಾಲು ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳಿಲ್ಲದ ಕಾರಣ ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆ ನಿವಾರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; (ವಿವರ ನೀಡುವುದು)</td><td>
ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು 46755 ಸರ್ಕಾರಿ ಶಾಲೆಗಳಿದ್ದು ಇದರಲ್ಲಿ 46673 ಶಾಲೆಗಳಲ್ಲಿ ಶೌಚಾಲಯ ವ್ಯವಸ್ಥೆ ಇರುತ್ತದೆ.<br>
ಶೌಚಾಲಯ ನಿರ್ಮಾಣ:-<br>
ನರೇಗಾ ಒಗ್ಗೂಡಿಸುವಿಕೆಯ ಮೂಲಕ ರಾಜ್ಯ ವಲಯದ ಯೋಜನೆಯಡಿಯಲ್ಲಿ ಸರ್ಕಾರಿ ಶಾಲೆಗಳ ಶೌಚಾಲಯ ನಿರ್ಮಾಣಕ್ಕಾಗಿ ಈ ಕೆಳಕಂಡಂತೆ ಅನುದಾನ ಬಿಡುಗಡೆಗೊಳಿಸಲಾಗಿರುತ್ತದೆ.<br>
(ರೂ.ಲಕ್ಷಗಳಲ್ಲಿ)
<table>
<tr><th>ವರ್ಷ</th><th>ಬಿಡುಗಡೆಯಾದ ಅನುದಾನ</th></tr>
<tr><td>2021-22</td><td>3500.00</td></tr>
<tr><td>2022-23</td><td>3500.00</td></tr>
<tr><td>2023-24</td><td>8000.00</td></tr>
<tr><td>ಒಟ್ಟು</td><td>15000.00</td></tr>
</table>
<ul>
<li>2024-25 ನೇ ಸಾಲಿನಲ್ಲಿ ಶೌಚಾಲಯ ನಿರ್ಮಾಣಕ್ಕೆ ರೂ.12279.00 ಲಕ್ಷಗಳು ಮಂಜೂರಾಗಿರುತ್ತದೆ. ಕ್ರಿಯಾ ಯೋಜನೆ ಪ್ರಗತಿಯಲ್ಲಿರುತ್ತದೆ.</li>
<li>ಶಾಲೆಗಳಲ್ಲಿನ ಶೌಚಾಲಯ ನಿರ್ವಹಣೆ ಮತ್ತು ಕುಡಿಯುವ ನೀರನ್ನು ಸರಬರಾಜು ಮಾಡಲು ಜಲಜೀವನ್ ಮಿಷನ್ ಅಡಿ ಕ್ರಮವಹಿಸಲು ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ಈಗಾಗಲೇ ದಿನಾಂಕ: 04-11-2020 ರಂದು ಸುತ್ತೋಲೆ ಹೊರಡಿಸಲಾಗಿದೆ.</li>
<li>ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳಿಲ್ಲದ ಶಾಲೆಗಳಲ್ಲಿ ಶೌಚಾಲಯಗಳನ್ನು ನಿರ್ಮಿಸಲು ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ.</li>
</ul>
<ul>
<li>2020-21 ಹಾಗೂ 2021-22ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಒಟ್ಟು 100 ಕೆ.ಪಿ.ಎಸ್ ಶಾಲೆಗಳ ನಿರ್ಮಾಣಕ್ಕಾಗಿ ಬಿಡುಗಡೆಯಾಗಿರುವ ರೂ.200.00 ಕೋಟಿಗಳ ಅನುದಾನದ ಪೈಕಿ ಶೌಚಾಲಯ ನಿರ್ಮಾಣಕ್ಕಾಗಿ ಪ್ರತ್ಯೇಕವಾಗಿ ರೂ.1430.00 ಲಕ್ಷಗಳ ಅನುದಾನ ನಿಗದಿಪಡಿಸಲಾಗಿದ್ದು, ಈ 100 ಕೆ.ಪಿ.ಎಸ್ ಶಾಲೆಗಳಿಗೆ ಶೌಚಾಲಯ ಕಲ್ಪಿಸಲು PWD ಇಲಾಖೆಗೆ ವಹಿಸಲಾಗಿದೆ.</li>
<li>2020-21 ನೇ ಸಾಲಿನಲ್ಲಿ ಮಾನ್ಯ ಕರ್ನಾಟಕ ಉಚ್ಚನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 50455/2008 ದಿನಾಂಕ:26.09.2019ರ ಆದೇಶದಂತೆ ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಒದಗಿಸುವ ಸಂಬಂಧ ರಾಜ್ಯಾದ್ಯಂತ 317 ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ಕಲ್ಪಿಸಲು ರೂ.1106.51ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು PWD ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದೆ.</li>
<li>ಮುಂದುವರೆದು, ಕೇಂದ್ರ ಪುರಸ್ಕೃತ ಯೋಜನೆಯಾದ ಸಮಗ್ರ ಶಿಕ್ಷಣ-ಕರ್ನಾಟಕ ಯೋಜನೆಯಡಿ 2022-23 ನೇ ಸಾಲಿನಲ್ಲಿ 26 ಶಾಲೆಗಳಲ್ಲಿ ಬಾಲಕ, ಬಾಲಕಿಯರು ಹಾಗೂ ವಿಶೇಷ ಅಗತ್ಯತೆವುಳ್ಳ ಮಕ್ಕಳಿಗೆ</li>
</ul>
</td></tr>
</table>

<table>
<tr><td></td><td></td><td>ಶೌಚಾಲಯಗಳನ್ನು ಒಳಗೊಂಡಂತೆ ಒಟ್ಟಾರೆ 97 ಕಾಮಗಾರಿಗಳನ್ನು ಕೈಗೊಳ್ಳಲು ರೂ.287.04 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು ಅನುಷ್ಠಾನ ಇಲಾಖೆಗಳಿಗೆ (ಶೇ 50% ರಷ್ಟು ಅನುದಾನ) ರೂ.143.52 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದ್ದು ಅನುಷ್ಠಾನಗೊಳಿಸಲು ಸೂಚಿಸಲಾಗಿದೆ.</td></tr>
<tr><td>ಆ)</td><td>ಸಾಕಷ್ಟು ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರು ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆ ನಿವಾರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; (ವಿವರ ನೀಡುವುದು)</td><td>ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು 46755 ಸರ್ಕಾರಿ ಶಾಲೆಗಳಿದ್ದು, ಎಲ್ಲಾ 46755 ಶಾಲೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇರುತ್ತದೆ.<br>ಕುಡಿಯುವ ನೀರು ಪೂರೈಕೆ ಮತ್ತು ಶೌಚಾಲಯ ನಿರ್ವಹಣೆ:-<br>ಕುಡಿಯುವ ನೀರು ಪೂರೈಕೆ ಮತ್ತು ಶೌಚಾಲಯ ನಿರ್ವಹಣೆಗಾಗಿ, ನಿರ್ವಹಣಾ ವೆಚ್ಚವನ್ನು ಕಳೆದ ವರ್ಷಗಳಲ್ಲಿ ಈ ಕೆಳಕಂಡಂತೆ ಬಿಡುಗಡೆ ಮಾಡಲಾಗಿದೆ.<br>(ರೂ.ಲಕ್ಷಗಳಲ್ಲಿ)
<table>
<tr><th>ವರ್ಷ</th><th>ಬಿಡುಗಡೆಯಾದ ಅನುದಾನ</th></tr>
<tr><td>2021-22</td><td>2500.00</td></tr>
<tr><td>2022-23</td><td>3500.00</td></tr>
<tr><td>2023-24</td><td>7122.00</td></tr>
</table>
<ul>
<li>2024-25ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಶಾಲೆಗಳ ಶೌಚಾಲಯ ನಿರ್ವಹಣೆ ಮತ್ತು ಇತರೇ ನಿರ್ವಹಣೆಗಾಗಿ ರೂ.5807.00 ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ.</li>
<li>2020-21 ಹಾಗೂ 2021-22ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಒಟ್ಟು 100 ಕೆ.ಪಿ.ಎಸ್ ಶಾಲೆಗಳ ನಿರ್ಮಾಣಕ್ಕಾಗಿ ಬಿಡುಗಡೆಯಾಗಿರುವ ರೂ.200.00 ಕೋಟಿಗಳ ಅನುದಾನದ ಪೈಕಿ ಶುದ್ಧ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಪ್ರತ್ಯೇಕವಾಗಿ ರೂ.175.00 ಲಕ್ಷಗಳ ಅನುದಾನ ನಿಗದಿಪಡಿಸಲಾಗಿದ್ದು, ಈ 100 ಕೆ.ಪಿ.ಎಸ್ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು PWD ಇಲಾಖೆಗೆ ವಹಿಸಲಾಗಿದೆ.</li>
<li>2020-21 ನೇ ಸಾಲಿನಲ್ಲಿ ಮಾನ್ಯ ಕರ್ನಾಟಕ ಉಚ್ಛನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 50455/2008 ದಿನಾಂಕ:26.09.2019ರ ಆದೇಶದಂತೆ ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಒದಗಿಸುವ ಸಂಬಂಧ ರಾಜ್ಯಾದ್ಯಂತ 319 ಸರ್ಕಾರಿ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ರೂ.59.32 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು PWD ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದೆ.</li>
<li>ಮುಂದುವರೆದು, ಕೇಂದ್ರ ಪುರಸ್ಕೃತ ಯೋಜನೆಯಾದ ಸಮಗ್ರ ಶಿಕ್ಷಣ-ಕರ್ನಾಟಕ ಯೋಜನೆಯಡಿ 2022-23 ನೇ ಸಾಲಿನಲ್ಲಿ 26 ಶಾಲೆಗಳ ಪೈಕಿ 02 ಶಾಲೆಗಳಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ರೂ.3.5 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು ಅನುಷ್ಠಾನ ಇಲಾಖೆಗಳಿಗೆ (ಶೇ 50% ರಷ್ಟು ಅನುದಾನ) ರೂ.1.95 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು ಅನುಷ್ಠಾನಗೊಳಿಸಲು ಸೂಚಿಸಲಾಗಿದೆ.</li>
</ul></td></tr>
<tr><td>ಇ)</td><td>ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಕೊಠಡಿಗಳು ಹಾಳಾಗಿದ್ದು, ಹೊಸ ಕಟ್ಟಡಗಳು ಇಲ್ಲದೆ ದುರಸ್ಥಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ: (ವಿವರ ನೀಡುವುದು)</td><td>ಶಾಲೆಗಳಲ್ಲಿ ಕೊಠಡಿ ನಿರ್ಮಾಣ/ದುರಸ್ತಿಗೆ ಕಳೆದ ಸಾಲುಗಳಲ್ಲಿ ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗಿದೆ.<br>ಕೊಠಡಿಗಳ ನಿರ್ಮಾಣ:-
<ol start="3"><li>ಕೇಂದ್ರ ಸರ್ಕಾರದ ಸಹಭಾಗಿತ್ವದಲ್ಲಿ ಕಳೆದ ವರ್ಷಗಳಲ್ಲಿ ಶಾಲೆಗಳ ಮೂಲಭೂತ ಸೌಲಭ್ಯಗಳಿಗೆ ಈ ಕೆಳಕಂಡಂತೆ ಅನುದಾನ ಒದಗಿಸಲಾಗಿದೆ.</li></ol>
(ರೂ.ಲಕ್ಷಗಳಲ್ಲಿ)
<table>
<tr><th>ಕ್ರ ಸಂ</th><th>ಸಾಲು</th><th>ವಿವರಗಳು</th><th>ಮಂಜೂರಾದ/ ನಿಗಧಿಪಡಿಸಿರುವ ಅನುದಾನ</th></tr>
</table></td></tr>
</table>

| | | | |
|---|---|---|---|
| 1. | 2022–23 | 48 ಶಾಲಾ ಕೊಠಡಿಗಳ ನಿರ್ಮಾಣ | 867.60 |
| | | 08 ಶಾಲಾ ಕಟ್ಟಡಗಳ ಉನ್ನತೀಕರಣ | 1224.00 |
| 2. | 2023–24 | 08 ಪ್ರೌಢ ಶಾಲಾ ಕಟ್ಟಡಗಳ ಉನ್ನತೀಕರಣ | 1464.00 |
| | | 06 ಹೈಯರ್ ಸೆಕೆಂಡರಿ (11 & 12) ಶಾಲಾ ಕಟ್ಟಡಗಳ ಉನ್ನತೀಕರಣ | 746.64 |

ಪ್ರಸಕ್ತ 2024–25ನೇ ಸಾಲಿನಲ್ಲಿ ಸಮಗ್ರ ಶಿಕ್ಷಣ ಕರ್ನಾಟಕದಡಿ ಈ ಕೆಳಕಂಡಂತೆ ಶಾಲಾ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕೇಂದ್ರ PABಯಿಂದ ಅನುಮೋದನೆ ನೀಡಲಾಗಿದೆ.

(ರೂ.ಲಕ್ಷಗಳಲ್ಲಿ)

| | ಕಾರ್ಯಕ್ರಮ | ಸಂಖ್ಯೆ | ಘಟಕ ವೆಚ್ಚ | ಒಟ್ಟು ಮೊತ್ತ |
|---|---|---|---|---|
| ಪ್ರಾಥಮಿಕ | ಕುಡಿಯುವ ನೀರಿನ ಸೌಲಭ್ಯ | 03 | 2.1 | 6.30 |
| | ವಿದ್ಯುತ್ ಸೌಲಭ್ಯ | 200 | 0.40 | 80.00 |
| | ಮೇಜರ್ ದುರಸ್ಥಿ | 79 | 10.05 | 793.95 |
| ಪ್ರೌಢ | ಪ್ರೌಢ ಶಾಲಾ ಹೊಸ ಕಟ್ಟಡ ನಿರ್ಮಾಣ | 01 | 210.25 | 210.25 |
| | ಪದವಿ ಪೂರ್ವ ಕಾಲೇಜು ಹೊಸ ಕಟ್ಟಡ ನಿರ್ಮಾಣ | 13 | 206.50 | 2684.50 |
| | ಮೇಜರ್ ದುರಸ್ಥಿ | 52 | 10.23 | 537.29 |

ರಾಜ್ಯ ಬಂಡವಾಳ ವೆಚ್ಚ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ ಕೆ.ಪಿ.ಎಸ್ ಶಾಲೆಗಳ ಮೂಲಭೂತ ಸೌಲಭ್ಯಗಳಿಗೆ ಈ ಕೆಳಕಂಡಂತೆ ಅನುದಾನ ಒದಗಿಸಲಾಗಿದೆ.

**ಕೆ.ಪಿ.ಎಸ್ ಶಾಲೆಗಳು**

| ಕ್ರ ಸಂ | ಸಾಲು | ವಿವರಗಳು | ಮಂಜೂರಾದ/ ನಿಗಧಿಪಡಿಸಿರುವ ಅನುದಾನ (ರೂ.ಕೋಟಿಗಳಲ್ಲಿ) |
|---|---|---|---|
| 1 | 2020–21 & 2021–22 | 100 ಕೆ.ಪಿ.ಎಸ್ ಶಾಲೆಗಳ ಕಟ್ಟಡ ನಿರ್ಮಾಣ | 200.00 |

| | | | |
|---|---|---|---|
| 2 | 2022–23 | 69 ಕೆ.ಪಿ.ಎಸ್ ಶಾಲೆಗಳಲ್ಲಿ ಹೆಚ್ಚುವರಿ ಕೊಠಡಿಗಳ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯ | 70.00 |
| | | ಎಸ್.ಡಿ.ಪಿ ಯೋಜನೆಯಡಿ 82 ಶಾಲೆಗಳಲ್ಲಿ ಕೊಠಡಿಗಳ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯ | 50.00 |
| 3 | 2023–24 | ಕೆ.ಪಿ.ಎಸ್ ಶಾಲೆಗಳನ್ನು ಹೊಂದಿಲ್ಲದ 22 ಮಹತ್ವಾಕಾಂಕ್ಷಿ ತಾಲ್ಲೂಕುಗಳಲ್ಲಿ ಹೊಸದಾಗಿ ಕೆ.ಪಿ.ಎಸ್ ಶಾಲೆಗಳನ್ನು ನಿರ್ಮಿಸಲು | 60.00 |
| | | 38 ಕೆ.ಪಿ.ಎಸ್ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು | 30.00 |
| 4 | 2024–25 | ಕೆ.ಪಿ.ಎಸ್ ಶಾಲೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು | 30.00 |

ರಾಜ್ಯ ಯೋಜನೆಯಡಿ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಲಭ್ಯ ಒದಗಿಸಲು ಕಳೆದ ವರ್ಷಗಳಲ್ಲಿ ಈ ಕೆಳಕಂಡಂತೆ ಅನುದಾನ ಬಿಡುಗಡೆಗೊಳಿಸಲಾಗಿರುತ್ತದೆ.

➢ **ಸರ್ಕಾರಿ ಶಾಲಾ ಕೊಠಡಿಗಳ ನಿರ್ಮಾಣ:**

| **ವರ್ಷ** | **ಯೋಜನೆ** | **ಮಂಜೂರಾದ ಶಾಲೆಗಳು** | **ಮಂಜೂರಾದ ಕಾಮಗಾರಿಗಳ ಸಂಖ್ಯೆ** | **ಮಂಜೂರಾದ ಅನುದಾನ (ರೂ.ಲಕ್ಷಗಳು)** | **ಬಿಡುಗಡೆ ಮಾಡಲಾದ ಅನುದಾನ (ರೂ.ಲಕ್ಷಗಳು)** |
|---|---|---|---|---|---|
| 2022–23 | ವಿವೇಕ | 4785 | 6601 | 94393.90 | 46901.84 |
| 2023–24 | ವಿವೇಕ | | | | 16960.61 |
| 2023–24 | CM Grants | 547 | 710 | 8808.00 | 4301.26 |
| **ಒಟ್ಟು** | | **5332** | **7311** | **103201.90** | **68163.71** |

2024–25ನೇ ಸಾಲಿಗೆ ಸರ್ಕಾರಿ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳಿಗೆ ಮುಂದುವರೆದ ಯೋಜನೆಗೆ ರೂ.23039.49ಲಕ್ಷಗಳು ಮತ್ತು ಹೊಸ ಯೋಜನೆಗೆ ರೂ.11546.41ಲಕ್ಷಗಳು ಸೇರಿದಂತೆ ಒಟ್ಟು ರೂ.34585.9ಲಕ್ಷಗಳ ಅನುದಾನವನ್ನು ನಿಗದಿಪಡಿಸಲಾಗಿದ್ದು, ಅಗತ್ಯತೆಗೆ ಅನುಗುಣವಾಗಿ ಕೊಠಡಿ ನಿರ್ಮಿಸಲು ಕ್ರಮವಹಿಸಲಾಗಿದೆ.

➢ **ಸರ್ಕಾರಿ ಶಾಲಾ ಕೊಠಡಿಗಳ ದುರಸ್ತಿ:**

| ವರ್ಷ | ಶಾಲೆಗಳ ಸಂಖ್ಯೆ | ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ) | ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 2021–22 | 518 | 1947.00 | 1947.00 |
| 2022–23 | 1833 | 4650.00 | 4650.00 |
| 2023–24 | 2162 | 7000.00 | 7000.00 |
| ಒಟ್ಟು | 4513 | 13597.00 | 13597.00 |

2024–25ನೇ ಸಾಲಿಗೆ ಸರ್ಕಾರಿ ಶಾಲಾ ಕೊಠಡಿಗಳ ದುರಸ್ಥಿ ಕಾಮಗಾರಿಗಳಿಗೆ ಮುಂದುವರೆದ ಯೋಜನೆಗೆ ರೂ.5129.66 ಲಕ್ಷಗಳು ಹಾಗೂ ಹೊಸ ಯೋಜನೆಗೆ ರೂ.10000.00ಲಕ್ಷಗಳು ನಿಗದಿಯಾಗಿದ್ದು, ಶಾಲಾ ಕೊಠಡಿ ದುರಸ್ತಿಗೊಳಿಸಲು ಅಗತ್ಯ ಕ್ರಮವಹಿಸಲಾಗುತ್ತಿದೆ.

ಈ) ಇತ್ತೀಚಿನ ದಿನಗಳಲ್ಲಿ ಶಾಲಾ ಶೌಚಾಲಯಗಳನ್ನು ವಿದ್ಯಾರ್ಥಿಗಳಿಂದಲೇ ಸ್ವಚ್ಛಗೊಳಿಸಲಾಗುತ್ತಿರುವ ಪ್ರಕರಣಗಳು ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಶಾಲಾ ಆವರಣ, ಕೊಠಡಿ ಹಾಗೂ ಶೌಚಾಲಯಗಳನ್ನು ಸ್ವಚ್ಛಗೊಳಿಸಲು ಸರ್ಕಾರ ರೂಪಿಸಿರುವ ನಿಯಮಗಳೇನು; ಅವುಗಳನ್ನು ಯಾರಿಂದ ಸ್ವಚ್ಛಗೊಳಿಸಬೇಕೆಂದು ಶಾಲಾ ಮುಖ್ಯಸ್ಥರಿಗೆ ಸೂಚಿಸಲಾಗಿದೆ; ಅವರುಗಳಿಗೆ ನೀಡುವ ಮಾಸಿಕ ವೇತನ ಎಷ್ಟು? (ವಿವರ ನೀಡುವುದು)

ಹೌದು

ಶೌಚಾಲಯ ಶುಚಿಗೊಳಿಸಲು ವಿದ್ಯಾರ್ಥಿಗಳನ್ನು ಬಳಸಿಕೊಳ್ಳಬಾರದೆಂದು ಹಾಗೂ ಶೌಚಾಲಯಗಳನ್ನು ಸ್ವಚ್ಛಗೊಳಿಸಲು ಸುತ್ತೋಲೆ ಸಂಖ್ಯೆ:ಎಡಿಎಂ2(4)ಶೌ.ನಿ/ 01/2023–24, ದಿ:28.12.2023ರಲ್ಲಿ ಸೂಚನೆಗಳನ್ನು ನೀಡಲಾಗಿರುತ್ತದೆ. (ಸುತ್ತೋಲೆಯನ್ನು ಅನುಬಂಧದಲ್ಲಿ ಲಗತ್ತಿಸಿದೆ)

ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕುಡಿಯುವ ನೀರು ಮತ್ತು ಶೌಚಾಲಯಗಳ ವಾರ್ಷಿಕ ನಿರ್ವಹಣೆಗಾಗಿ ಪ್ರತಿ ವರ್ಷ ಅನುದಾನ ಬಿಡುಗಡೆ ಮಾಡಲಾಗುತ್ತಿದ್ದು, ಸದರಿ ಅನುದಾನವನ್ನು ಸರ್ಕಾರಿ ಪ್ರೌಢಶಾಲೆಗಳಿಗೆ ರಾಜ್ಯದ ಎಲ್ಲಾ ಉಪನಿರ್ದೇಶಕರ ಮೂಲಕ ಹಾಗೂ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದ ಅನುದಾನವನ್ನು ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಶಾಲಾ ಮುಖ್ಯ ಶಿಕ್ಷಕರ/ಎಸ್.ಡಿ.ಎಂ.ಸಿ ಅಧ್ಯಕ್ಷರ ಜಂಟಿ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡಲಾಗಿದೆ. ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು/ಎಸ್.ಡಿ.ಎಂ.ಸಿಯು ಶೌಚಾಲಯ ಶುಚಿ ಸೇರಿದಂತೆ ಶಾಲಾ ನಿರ್ವಹಣೆಗೆ ಸಂಬಂಧಿಸಿದ ಖರ್ಚನ್ನು ನಿಯಮಾನುಸಾರ ಭರಿಸಲು ತಿಳಿಸಲಾಗಿರುತ್ತದೆ.

ಮುಂದುವರೆದು 2024–25ನೇ ಸಾಲಿನಲ್ಲಿ ನಿರ್ವಹಣಾ ವೆಚ್ಚವನ್ನು ಮಕ್ಕಳ ದಾಖಲಾತಿಗೆ ಅನುಗುಣವಾಗಿ ಈ ಕೆಳಕಂಡಂತೆ ಅನುದಾನವನ್ನು ಮಂಜೂರು ಮಾಡಲಾಗಿದ್ದು.ವಿವರ ಕೆಳಕಂಡಂತಿದೆ.

| ಕ್ರಸಂ | ಮಕ್ಕಳ ದಾಖಾಲಾತಿ ಸಂಖ್ಯೆ | ಘಟಕ ವೆಚ್ಚ (ರೂ.ಗಳಲ್ಲಿ) |
|---|---|---|
| 1 | 1–50 | 9250/– |
| 2 | 51–100 | 14000/– |
| 3 | 101–500 | 17500/– |
| 4 | 501 + | 22500/– |

ಸದರಿ ಅನುದಾನದಿಂದ ಪ್ರಥಮ ಪ್ರಾಶಸ್ತ್ಯದಲ್ಲಿ ಶೌಚಾಲಯಗಳ ಸ್ವಚ್ಛತಾ ಕಾರ್ಯಗಳಿಗೆ ಬಳಸಿಕೊಂಡು ಆಯಾ ಶಾಲಾ ಎಸ್.ಡಿ.ಎಂ.ಸಿಗಳ ಸಹಕಾರದೊಂದಿಗೆ ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಕಾಲ ಕಾಲಕ್ಕೆ ರಾಜ್ಯದ ಎಲ್ಲಾ ಶಾಲಾ ಶೌಚಾಲಯಗಳ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಲು ತಿಳಿಸಲಾಗಿರುತ್ತದೆ.

**ಇಪಿ: 218 ಯೋಸಕ 2024**

(ಎಸ್.ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು